# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 224 |
| ಉತ್ತರಿಸಬೇಕಾದ ದಿನಾಂಕ | 14.02.2024 |
| ಉತ್ತರಿಸಬೇಕಾದ ಸಚಿವರು | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ವಿವಿಧ ಗೃಹ ಯೋಜನೆಯಡಿಯಲ್ಲಿ ಬೆಂಗಳೂರು ಜಿಲ್ಲೆಗೆ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ಮತ್ತು ಅವುಗಳ ನಿರ್ಮಾಣ ಯಾವ ಹಂತದಲ್ಲಿವೆ;( ಸಂಪೂರ್ಣ ಮಾಹಿತಿ ನೀಡುವುದು) | ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಅಂದರೆ 2023-24ನೇ ಸಾಲಿಗೆ ಸರ್ಕಾರದಿಂದ ಹೊಸ ಮನೆಗಳ ಗುರಿ ಹಂಚಿಕೆ ಮಾಡಿರುವುದಿಲ್ಲ.<br><br>2021-22ನೇ ಸಾಲಿಗೆ ಬೆಂಗಳೂರು ಜಿಲ್ಲೆಗೆ ವಿವಿಧ ವಸತಿ ಯೋಜನೆಯಡಿಯಲ್ಲಿ ಮಂಜೂರು ಮಾಡಲಾಗಿರುವ ಹಾಗೂ ಅವುಗಳ ನಿರ್ಮಾಣ ಹಂತದಲ್ಲಿರುವ ವಿವರ ಈ ಕೆಳಗಿನಂತಿದೆ:<br><br>**ಬೆಂಗಳೂರು ಗ್ರಾಮಾಂತರ ಜಿಲ್ಲೆ:**<br>2021-22ನೇ ಸಾಲಿಗೆ ವಿವಿಧ ವಸತಿ ಯೋಜನೆಯಡಿಯಲ್ಲಿ ಒಟ್ಟು 6,768 ಮನೆಗಳನ್ನು ಮಂಜೂರು ಮಾಡಿ ಕಾಮಗಾರಿ ಆದೇಶ ನೀಡಲಾಗಿರುತ್ತದೆ. ಈ ಮನೆಗಳ ಪೈಕಿ 2,616 ಮನೆಗಳು ಪೂರ್ಣಗೊಂಡಿರುತ್ತವೆ. 1,596 ಮನೆಗಳು ಪ್ರಗತಿಯಲ್ಲಿರುತ್ತವೆ. 2,496 ಮನೆಗಳು ಪ್ರಾರಂಭವಾಗಬೇಕಾಗಿದ್ದು, ಇನ್ನೂಳಿದ 60 ಮನೆಗಳನ್ನು ವಿವಿಧ ಕಾರಣಗಳಿಂದ ತಾತ್ಕಲಿಕವಾಗಿ ತಡೆಹಿಡಿಯಲಾಗಿರುತ್ತದೆ.<br><br>**ಬೆಂಗಳೂರು ನಗರ ಜಿಲ್ಲೆ:**<br>2021-22ನೇ ಸಾಲಿಗೆ ವಿವಿಧ ವಸತಿ ಯೋಜನೆಯಡಿಯಲ್ಲಿ ಒಟ್ಟು 2,614 ಮನೆಗಳನ್ನು ಮಂಜೂರು ಮಾಡಿ ಕಾಮಗಾರಿ ಆದೇಶ ನೀಡಲಾಗಿರುತ್ತದೆ. ಈ ಮನೆಗಳ ಪೈಕಿ 1,080 ಮನೆಗಳು ಪೂರ್ಣಗೊಂಡಿರುತ್ತವೆ. 525 ಮನೆಗಳು ಪ್ರಗತಿಯಲ್ಲಿರುತ್ತವೆ. 991 ಮನೆಗಳು ಪ್ರಾರಂಭವಾಗಬೇಕಾಗಿದ್ದು, ಇನ್ನುಳಿದ 18 ಮನೆಗಳನ್ನು ವಿವಿಧ ಕಾರಣಗಳಿಂದ ತಾತ್ಕಲಿಕವಾಗಿ ತಡೆಹಿಡಿಯಲಾಗಿರುತ್ತದೆ. |
| ಆ) | ಗ್ರಾಮ ಪಂಚಾಯಿತಿಗಳಿಗೆ ರಾಜೀವ್ ಗಾಂಧಿ ವಸತಿ ನಿಗಮದಿಂದ ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ? | ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಬೆಂಗಳೂರು ಗ್ರಾಮಾಂತರ ಮತ್ತು ಬೆಂಗಳೂರು ನಗರ ಜಿಲ್ಲೆಗಳಲ್ಲಿ ಗ್ರಾಮೀಣ ಪ್ರದೇಶದ ವಸತಿ ಯೋಜನೆಗಳಲ್ಲಿ ಹಿಂದಿನ ಶ್ರೇಣಿಗಳಲ್ಲಿ ಪ್ರಗತಿಯಲ್ಲಿದ್ದ ಮನೆಗಳನ್ನೊಳಗೊಂಡಂತೆ ವಿವಿಧ ವಸತಿ ಯೋಜನೆಯಡಿ ಒಟ್ಟು 2,001 ಮನೆಗಳನ್ನು ನಿರ್ಮಾಣ ಮಾಡಲಾಗಿದೆ. |

ಸಂಖ್ಯೆ: ವಇ 22 ಹೆಚ್‌ಎಫ್‌ಎ 2024]

(ಬಿ.ಝಡ್ ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು